ರಂದು ರಿಟ್ ಅಫೀಲು ಸಲ್ಲಿಸಿದ್ದರು. ಸದರಿ ರಿಟ್ ಅಫೀಲ್ ದಿ: 7-11-2000ರಂದು ಇತ್ಯರ್ಥವಾಗಿದೆ. ಕಾನೂನು ಪ್ರಕಾರ 5 ವರ್ಷಕ್ಕೊಮ್ಮೆ ಕನಿಷ್ಠ ವೇತನವನ್ನು ಪರಿಷ್ಕರಿಸಬೇಕಾಗುತ್ತದೆ. ಅಂದರೆ ಈ ಉದ್ದಿಮೆಗೆ 1999ರಲ್ಲಿ ಕನಿಷ್ಠ ವೇತನವನ್ನು ಪರಿಷ್ಕರಿಸಬೇಕಾಗಿತ್ತು. ಆದ್ದರಿಂದ ರಿಟ್ ಅಫೀಲು ಇತ್ಯರ್ಥವಾದಕೂಡಲೇ ಸೂಕ್ತ ಕ್ರಮ ತೆಗೆದುಕೊಂಡು ದಿ: 8-3-2001ರಂದು ಕರಡು ಅಧಿಸೂಚನೆಯನ್ನು ಹೊರಡಿಸಲಾಗಿದೆ.

ಆ) ರಾಜ್ಯದ ಅಸಂಘಟಿತ ನೌಕರರು ದುಡಿಯುತ್ತಿರುವ ಉದ್ದಿಮೆಗಳನ್ನು ಗುರ್ತಿಸಿ 67 ಉದ್ದಿಮೆಗಳನ್ನು ಕನಿಷ್ಠ ವೇತನ ಕಾಯ್ದೆಯ ಅನುಸೂಚಿಗೆ ಸೇರಿಸಿ 58 ಉದ್ದಿಮೆಗಳಿಗೆ ಕನಿಷ್ಠ ವೇತನ ನಿಗಧಿಪಡಿಸಲು ಕ್ರಮಕ್ಕೆಗೊಳ್ಳಲಾಗುತ್ತಿದೆ. ಅಲ್ಲದೆ ಅಸಂಘಟಿತ ಕಾರ್ಮಿಕರಿಗಾಗಿ ಸರ್ಕಾರ ಅಶಾಕಿರಣ ಯೋಜನೆಯನ್ನು ಜಾರಿಗೆ ತಂದಿದೆ. ಈ ಯೋಜನೆಯಡಿಯಲ್ಲಿ ಅಪಘಾತಕ್ಕೆ ಈಡಾಗುವ ಅಸಂಘಟಿತ ಕಾರ್ಮಿಕರಿಗೆ ರೂ. 1,500ರಿಂದ 4,000 ರವರೆಗೆ ಪರಿಹಾರ ಧನವನ್ನು ನೀಡಲಾಗುವುದು. ಇತರ ಕಾರ್ಮಿಕ ಕಾನೂನುಗಳನುಸಾರ ಲಭ್ಯವಿರುವ ಸೌಲಭ್ಯಗಳನ್ನು ಅಸಂಘಟಿತ ಕಾರ್ಮಿಕರಿಗೆ ಸಿಗುವಂತೆ ಕ್ರಮ ಕೈಗೊಳ್ಳಲಾಗುತ್ತದೆ.

ರಾಜ್ಯದಲ್ಲಿ ಸಮಗ್ರ ಕ್ರೀಡಾನೀತಿ ಜಾರಿಗೆ ತರುವುದರ ಬಗ್ಗೆ.

2299(3114) ಶ್ರೀ ಯೋಗೀಶ್ ಭಟ್ ಎನ್. (ಮಂಗಳೂರು) :— ಮಾನ್ಯ ಯುವಜನ ಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ರಾಜ್ಯ ಮಟ್ಟದಲ್ಲಿ ಸಮಗ್ರ ಕ್ರೀಡಾ ನೀತಿ ತರಲು ಸರಕಾರ ಯೋಜಿಸಿದೆಯೇ?

ಆ) ಹಾಗಿದ್ದಲ್ಲಿ ಯಾವಾಗ ಈ ಯೋಜನೆಯನ್ನು ಅನುಷ್ಠಾನಕ್ಕೆ ತರಲಾಗುತ್ತದೆ?

ಇ) ಕ್ರೀಡಾಪಟುಗಳಿಗೆ ಶೇ. 15 ಕೃಪಾಂಕ ಹಾಗೂ ಕ್ರೀಡಾ ಸ್ಪರ್ಧೆಗಳು ನಡೆಯುವ ಸಂದರ್ಭದಲ್ಲಿ ಉಚಿತ ವಸತಿ ಆಹಾರ ಸೌಲಭ್ಯ ಒದಗಿಸಲು ಸರ್ಕಾರ ಕ್ರಮ ಕೈಗೊಳ್ಳಬಹುದೇ?

ಈ) ಆಂಧ್ರ ಸರ್ಕಾರದ ಮಾದರಿಯಲ್ಲಿ ಅಧ್ಯಯನ ಮಾಡುವ ರಾಷ್ಟ್ರೀಯ ಮಟ್ಟದ ಕ್ರೀಡಾಪಟುಗಳಿಗೆ ಶೇ. 5 ಹಾಗೂ ನೇಮಕಾತಿಯಲ್ಲಿ ಶೇ. 2ರಷ್ಟು ಸೀಟು ಕೊಡಲು ಸರ್ಕಾರ ಬಯಸುವುದೇ?

ಶ್ರೀ ಎಸ್.ಎಸ್. ಮಲ್ಲಿಕಾರ್ಜುನ (ಯುವಜನ ಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು) :—

ಅ) ಹೌದು.

ಆ) ಕರಡು ಕ್ರೀಡಾ ನೀತಿ ಪರಿಶೀಲನೆಯಲ್ಲಿದೆ.

ಇ) ರಾಜ್ಯ, ರಾಷ್ಟ್ರ ಹಾಗೂ ಅಂತರ ರಾಷ್ಟ್ರೀಯ ಮಟ್ಟದ ಕ್ರೀಡಾಕೂಟಗಳಲ್ಲಿ ರಾಜ್ಯವನ್ನು ಪ್ರತಿನಿಧಿಸಿದ ವಿದ್ಯಾರ್ಥಿಗಳಿಗೆ ಎಸ್.ಎಸ್.ಎಲ್.ಸಿ. ಹಾಗೂ ಪಿ.ಯು.ಸಿ. ಪಬ್ಲಿಕ್ ಪರೀಕ್ಷೆಗಳಲ್ಲಿ ಪ್ರತ್ಯೇಕವಾಗಿ ಕೃಪಾಂಕಗಳನ್ನು ನೀಡಿದಲ್ಲಿ ಶಿಕ್ಷಣದ ಗುಣಮಟ್ಟದಲ್ಲಿ ತೀವ್ರವಾಗಿ ಕ್ಷೀಣತೆ ಉಂಟಾಗುತ್ತದೆ ಎಂದು ನಿರಾಕರಣಾತ್ಮಕ ನಿಲುವನ್ನು ತೆಗೆದುಕೊಂಡಿರುವುದರಿಂದ ಕ್ರೀಡಾಪಟುಗಳಿಗೆ ಕೃಪಾಂಕ ನೀಡುವುದನ್ನು ಪರಿಗಣಿಸಲು ಬರುವುದಿಲ್ಲ.

ಕ್ರೀಡಾ ಸ್ಪರ್ಧೆಗಳು ರಾಜ್ಯಮಟ್ಟದಲ್ಲಿ ನಡೆಯುವಾಗ ಕ್ರೀಡಾಪಟುಗಳಿಗೆ ಉಚಿತ ವಸತಿ ಹಾಗೂ ಆಹಾರ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ.

ಈ) ಆಂಧ್ರ ಸರ್ಕಾರದ ಮಾದರಿಯಲ್ಲಿ ಅಧ್ಯಯನ ಮಾಡುವ ರಾಷ್ಟ್ರೀಯ ಮಟ್ಟದ ಕ್ರೀಡಾಪಟುಗಳಿಗೆ ನೇಮಕಾತಿ ಹಾಗೂ ಸೀಟು ನೀಡುವ ಅವಕಾಶವಿರುವುದಿಲ್ಲ.

ಮಂಗಳೂರು ವಿಧಾನ ಸಭಾಕ್ಷೇತ್ರದಲ್ಲಿ ಪಿಡಬ್ಲ್ಯೂಡಿ ರಸ್ತೆಗಳ ದುರಸ್ತಿ.

2300(3283) ಶ್ರೀ ಯೋಗೀಶ್ ಭಟ್ ಎನ್. (ಮಂಗಳೂರು) :— ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಮಂಗಳೂರು ವಿಧಾನಸಭಾ ಕ್ಷೇತ್ರದಲ್ಲಿ ಪಿಡಬ್ಲ್ಯೂಡಿ ರಸ್ತೆಗಳ ದುರಸ್ತಿಗೆ, ಕಾಂಕ್ರಿಟಿಕರಣಕ್ಕೆ, ರಾಜ್ಯ ಹೆದ್ದಾರಿಗಳ ದುರಸ್ತಿಗೆ ವಸತಿ ಗೃಹಗಳ ದುರಸ್ತಿಗೆ, ಕೋರ್ಟು ಕಛೇರಿಗಳ ದುರಸ್ತಿಗಾಗಿ ಎಷ್ಟು ಅಂದಾಜು ವೆಚ್ಚ ಮಾಡಬೇಕಾಗಿದೆ. ಈ ಹಣವನ್ನು ಯಾವಾಗ ಬಿಡುಗಡೆ ಮಾಡಲಾಗುವುದು 1999-2000, 2000-2001 ರಲ್ಲಿ ಮೇಲಿನ ವಿಷಯಗಳಿಗೆ ಎಷ್ಟು ಹಣ ಮಂಜೂರಾತಿಯಾಗಿದೆ ಎಷ್ಟು ಹಣ ಬಿಡುಗಡೆಯಾಗಿದೆ; ಎಷ್ಟು ಹಣ ಖರ್ಚು ಮಾಡಲಾಗಿದೆ?

ಶ್ರೀ ಧರ್ಮಸಿಂಗ್ (ಲೋಕೋಪಯೋಗಿ ಸಚಿವರು) :—

ಮಂಗಳೂರು ವಿಧಾನ ಸಭಾ ಕ್ಷೇತ್ರದಲ್ಲಿ ಪಿಡಬ್ಲ್ಯೂಡಿ ರಸ್ತೆಗಳ ದುರಸ್ತಿಗೆ 4.50 ಲಕ್ಷ ಕಾಂಕ್ರೀಟಿಕರಣಕ್ಕೆ 392.00ಲಕ್ಷಗಳು, ರಾಜ್ಯ ಹೆದ್ದಾರಿಗಳ ದುರಸ್ತಿಗೆ 21.10 ಲಕ್ಷಗಳಷ್ಟು ಬೇಕಾಗಬಹುದೆಂದು ಅಂದಾಜಿಸಲಾಗಿದೆ.

ವಸತಿ ಗೃಹಗಳ ದುರಸ್ತಿಗಾಗಿ ರೂ. 60 ಲಕ್ಷ ಮತ್ತು ಕೋರ್ಟುಕಛೇರಿಗಳ ದುರಸ್ತಿಗಾಗಿ ರೂ. 5.00 ಲಕ್ಷಗಳು ಬೇಕಾಗಬಹುದೆಂದು ಅಂದಾಜಿಸಲಾಗಿದೆ.

ರಸ್ತೆಗಳ ದುರಸ್ತಿಗಾಗಿ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.